# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಎತ್ತಿನಹೊಳೆ ಯೋಜನೆಯ ರೂ.12,912.36 ಕೋಟಿಗಳ ಪರಿಷ್ಕೃತ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

+++++

*ಓದಲಾಗಿದೆ :-*

1. ಸರ್ಕಾರದ ಆದೇಶ ಸಂಖ್ಯೆ: ಜಸಂಇ:203:ವಿಬ್ಯಾಇ:2012, ದಿನಾಂಕ: 13.07.2012.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ರವರ ಪತ್ರ ಸಂಖ್ಯೆ:ಕನೀನಿ/ಎತ್ತಿನಹೊಳೆ/ಡಿ.ಪಿ.ಆರ್/2013-14/4993/ದಿನಾಂಕ:07.02.2014.

*ಪ್ರಸ್ತಾವನೆ :-*

ಮೇಲೆ ಓದಲಾದ (1) ಸರ್ಕಾರದ ಆದೇಶದಲ್ಲಿ, ಪಶ್ಚಿಮಾಭಿಮುಖವಾಗಿ ಹರಿಯುವ ನದಿಗಳ ಪ್ರವಾಹದ 24.01 ಟಿ.ಎಂ.ಸಿ ನೀರನ್ನು ಸಕಲೇಶಪುರದಿಂದ ತಿರುಗಿಸುವ ರೂ.8323.50 ಕೋಟಿಗಳ ಎತ್ತಿನಹೊಳೆ ಯೋಜನೆಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ. ಕರ್ನಾಟಕ ನೀರಾವರಿ ನಿಗಮದ ತಾಂತ್ರಿಕ ಉಪ ಸಮಿತಿಯು ಒಪ್ಪಿರುವ ರೂ.3269.50 ಕೋಟಿ ಮೊತ್ತದ ಅಂದಾಜು ಪತ್ರಿಕೆ ಆಧಾರದ ಮೇಲೆ, ಮೊದಲನೆ ಹಂತದಲ್ಲಿ ಹರವನಹಳ್ಳಿ ವಿತರಣಾ ಕೇಂದ್ರದವರೆಗಿನ ರೂ.3269.50 ಕೋಟಿ ಮೊತ್ತದ ಏತ ಕಾಮಗಾರಿಗಳನ್ನು (Lift component works upto Haravanahalli delivery chamber ) EPC/Turn-key ಆಧಾರದ ಮೇಲೆ ಕೈಗೆತ್ತಿಕೊಳ್ಳುವಂತೆ ಮತ್ತು ಕರ್ನಾಟಕ ನೀರಾವರಿ ನಿಗಮದ ತಾಂತ್ರಿಕ ಉಪಸಮಿತಿಯ ಜೊತೆ ಸಮಾಲೋಚನೆಯೊಂದಿಗೆ ಅನುಕೂಲಕರ (Suitable) ಪ್ಯಾಕೇಜ್‌ಗಳಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳುವಂತೆ ಹಾಗೂ ವಿವರವಾದ ಯೋಜನಾ ವರದಿಯು ತಯಾರಾದ ನಂತರ ಈ ಯೋಜನೆಗೆ ಪರಿಷ್ಕೃತ ಮೊತ್ತಕ್ಕೆ ಸರ್ಕಾರದ ಅನುಮೋದನೆ ಪಡೆಯಬೇಕೆಂದು ಸದರಿ ಆದೇಶದಲ್ಲಿ ತಿಳಿಸಲಾಗಿದೆ.

ಮೇಲೆ ಓದಲಾದ (2) ಪತ್ರದಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಇವರು ರೂ.12,912.36 ಕೋಟಿ ಮೊತ್ತದ (2012-13ರ ದರಪಟ್ಟಿಯಂತೆ) ಎತ್ತಿನಹೊಳೆ ಯೋಜನೆಯ ಪರಿಷ್ಕೃತ ವಿವರವಾದ ಯೋಜನಾ ವರದಿಯನ್ನು ತಯಾರಿಸಿ ಅದಕ್ಕೆ ನಿಗಮದ ಅಂದಾಜು ಪರಿಶೀಲನಾ ಸಮಿತಿಯ, ದಿನಾಂಕ:08.01.2014ರಲ್ಲಿ ನಡೆದ 3ನೇ ಸಭೆಯಲ್ಲಿ ತೀರುವಳಿ, ಮತ್ತು ಕರ್ನಾಟಕ ನೀರಾವರಿ ನಿಗಮದ ಮಂಡಳಿಯ, ದಿನಾಂಕ:24.01.2014 ರಲ್ಲಿ ನಡೆದ 62ನೇ ಸಭೆಯಲ್ಲಿ ಅನುಮೋದನೆ ಪಡೆದು ಮಂಡಳಿಯ ಶಿಫಾರಸ್ಸಿನಂತೆ ಸರ್ಕಾರದ ಆಡಳಿತಾತ್ಮಕ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ರವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು, ಕರ್ನಾಟಕ ನೀರಾವರಿ ನಿಗಮ ಈ ಕೆಳಕಂಡ ಅಂಶಗಳ ಬಗ್ಗೆ ಕ್ರಮವಹಿಸಬೇಕೆಂಬ ಅಭಿಪ್ರಾಯದೊಂದಿಗೆ ಆದೇಶವನ್ನು ಹೊರಡಿಸಲಾಗಿದೆ.

1) The corporation (KNNL) needs to draw a comprehensive financial flow schedule along with a PERT chart.
2) To workout the cost –benefit ratio and provide proper justification for the high cost ratio.
3) To take proper precaution to see that the cost of the project does not escalate further, as far as possible in view of the already existing high cost ratio.
4) To obtain all necessary clearances on a fast track mode to keep the cost of the project at control.
5) To make proper allocations in the budgets of the coming years, so as to complete the project in time.

**ಸರ್ಕಾರಿ ಆದೇಶ ಸಂ: ಜಸಂಇ 203 ವಿಬ್ಯಾಇ 2012, ಬೆಂಗಳೂರು, ದಿನಾಂಕ: 17.02.2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಎತ್ತಿನಹೊಳೆ ಯೋಜನೆಯ ರೂ.12,912.36 ಕೋಟಿ ಮೊತ್ತದ (2012–13ರ ದರ ಪಟ್ಟಿಯಂತೆ), ಪರಿಷ್ಕೃತ ವಿವರವಾದ ಯೋಜನಾ ವರದಿಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ:ಸಂ. ಪಿಡಬ್ಲ್ಯುಡಿ 124 ಎಫ್‌ಸಿ–1/2014 ದಿನಾಂಕ: 10.02.2014 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
17/2/14
(ಕೆ.ಎಸ್. ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ–4),
ಜಲ ಸಂಪನ್ಮೂಲ ಇಲಾಖೆ.

**ಇವರಿಗೆ**

1) ಮಹಾಲೇಖಪಾಲರು (ಲೆಕ್ಕ ಪತ್ರ/ಲೆಕ್ಕ ಪರಿಶೋಧನೆ), ಕರ್ನಾಟಕ, ಬೆಂಗಳೂರು
2) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ ಶಾಖೆ), ವಿಧಾನ ಸೌಧ, ಬೆಂಗಳೂರು (ಸಚಿವ ಸಂಪುಟ ಸಂಖ್ಯೆ: ಸಿ.122/2014, ದಿನಾಂಕ 11.02.2014ರ ಮೇರೆಗೆ)
3) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
6) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ
7) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಇಂಧನ ಇಲಾಖೆ, ವಿಕಾಸ ಸೌಧ
8) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪರಿಸರ, ಅರಣ್ಯ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
9) ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
10) ಸರ್ಕಾರದ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
11) ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
12) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಕಾಫಿ ಬೋರ್ಡ್ ಕಟ್ಟಡ, ಬೆಂಗಳೂರು
13) ಮುಖ್ಯ ಇಂಜಿನಿಯರ್, ಭದ್ರಾ ಮೇಲ್ದಂಡೆ ಯೋಜನಾ ವಲಯ, ಚಿತ್ರದುರ್ಗ
14) ಮುಖ್ಯ ಇಂಜಿನಿಯರ್, ಜಲ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ / ಅಂತರರಾಜ್ಯ ಜಲ ವಿವಾದ, ಆನಂದರಾವ್ ವೃತ್ತ, ಬೆಂಗಳೂರು
15) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಪತ್ರಾಂಕಿತ ಆಪ್ತ ಸಹಾಯಕರು, ಜಲ ಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು
16) ಸರ್ಕಾರದ ಕಾರ್ಯದರ್ಶಿಗಳ ಆಪ್ತ ಸಹಾಯಕರು, ಜಲ ಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು
17) ಸರ್ಕಾರದ ಜಂಟಿ ಕಾರ್ಯದರ್ಶಿ (ಸೇವೆಗಳು), ಜಲ ಸಂಪನ್ಮೂಲ ಇಲಾಖೆ
18) ವಿಶೇಷಾಧಿಕಾರಿ ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ (ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು
19) ಜಲ ಸಂಪನ್ಮೂಲ ಇಲಾಖೆಯ ಎಲ್ಲಾ ಉಪ ಕಾರ್ಯದರ್ಶಿಗಳು / ವಿಶೇಷ ಕರ್ತವ್ಯಾಧಿಕಾರಿಗಳು / ಸರ್ಕಾರದ ಅಧೀನ ಕಾರ್ಯದರ್ಶಿಗಳು
20) ಮಾನ್ಯ ಜಲ ಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
21) ನಿರ್ದೇಶಕರು, ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು, 10 ಪ್ರತಿಗಳು
22) ಶಾಖಾ ರಕ್ಷಾ ಕಡತ/ಹೆಚ್ಚಿನ ಪ್ರತಿ.